KAUK910010782025



# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ , ಸಿದ್ಧಾಪುರ

**ಸಿ.ಸಿ. 659/2025**

ಫಿರ್ಯಾದಿಃ ಅಕ್ಷಯ ಕೋ- ಆಪ್ ಕ್ರೆಡಿಟ್ ಸೊಸೈಟಿ ಲಿ. ಕಾರವಾರ ಬ್ರಾಂಚ ಸಿದ್ದಾಪುರ
ಇದರ ವತಿಯಿಂದ ಶಾಖಾ ವ್ಯವಸ್ಥಾಪಕರು, ಸಿದ್ದಾಪುರ ಶಾಖೆ, ಸಿದ್ದಾಪುರ

-ವಿರುದ್ಧ-

ಆರೋಪಿಃ **ಲೋಹಿತ ಕಮಲಾಕರ ಕೊಡಿಯಾ**, 32 ವರ್ಷ ,
ವಾಸಃ ಈರಮ್ಮ ಓಣಿ, ಬಿಳಗಿ, ಪೊಃ ಬಿಳಗಿ, ತಾಃ ಸಿದ್ದಾಪುರ.
ಉತ್ತರ ಕನ್ನಡ-581322

ನಾನು **ಶ್ರೀ ಉಮೇಶ. ಎಮ್.ಪಿ. ಬಿ.ಎ.ಎಲ್., ಎಲ್.ಎಲ್.ಬಿ.,** ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ, ಸಿದ್ಧಾಪುರ ಆದ ನಾನು, ಆರೋಪಿತನಾದ ನಿನ್ನ ಮೇಲೆ ಈ ಕೆಳಗಿನಂತೆ ಆರೋಪ ಹೊರಿಸುತ್ತಿದ್ದೇನೆ.

## ಆಪಾದನೆ

ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಫಿರ್ಯಾದುದಾರರು ಅಕ್ಷಯ ಕೋ- ಆಪ್ ಕ್ರೆಡಿಟ್ ಸೊಸೈಟಿ ಲಿ. ಕಾರವಾರ ಬ್ರಾಂಚ ಸಿದ್ದಾಪುರ ಸಂಸ್ಥೆಯು ಕರ್ನಾಟಕ ಸೌಹಾರ್ದಾ ಕೋ-ಆಪರೇಟಿವ್ ಕಾಯ್ದೆ ರಡಿಯಲ್ಲಿ ನೊಂದಾಯಿತ ಸಂಸ್ಥೆಯಾಗಿದ್ದು ಹಣಕಾಸು ವ್ಯವಹಾರ, ಅಗತ್ಯವಿರುವವರಿಗೆ ಹಣವನ್ನು ಸಾಲವಾಗಿ ನೀಡುವ ಸೌಹಾರ್ದ ಸಹಕಾರಿ ಸಂಸ್ಥೆಯಾಗಿದ್ದು, ಆರೋಪಿತನಾದ ನೀನು ಫಿರ್ಯಾದುದಾರರ ಸಹಕಾರಿ ಸಂಸ್ಥೆಯಲ್ಲಿ ಸಾಲಕ್ಕಾಗಿ ಮನವಿ ಮಾಡಿದ್ದು, ನಂತರ ಸಾಲದ ಖಾತೆ ನಂ. BL-1101200001643 ಯಿಂದ ದಿನಾಂಕ 08.04.2024 ರಂದು ರೂ. 20,00,000/- ಗಳನ್ನು ಸಾಲ ಪಡೆದಿದ್ದು, ಆರೋಪಿತನಾದ ನೀನು ಸಾಲದ ಕಂತುಗಳನ್ನು ಸರಿಯಾಗಿ ಪಾವತಿ ಮಾಡದೆ ಇದ್ದು, ಸದರಿ ಸಾಲದ ಈಗಿನ ಬಾಕಿ ಮೊತ್ತವು ರೂ. 5,00,000/- ಆಗಿದ್ದು ಹಾಗೂ ಫಿರ್ಯಾದುದಾರರ ಸಂಸ್ಥೆಯು ಹಲವು ಬಾರಿ ಸಾಲದ ಮರುಪಾವತಿಗಾಗಿ ಬೇಡಿಕೆ ಇಟ್ಟಿದ್ದು, ಸದರಿ ಸಾಲದ ಬಾಬ್ತಿಗಾಗಿ ದಿನಾಂಕ 08.10.2025 ರ ಕೆನರಾ ಬ್ಯಾಂಕ ಬಿಳಗಿ ಶಾಖೆಯ ಚೆಕ್ಕಿನ ಸಂಖ್ಯೆ: 394358 ನ ರೂ. 5,00,000/-ನ ಚೆಕ್ಕನ್ನು ನೀಡಿದ್ದು, ತದನಂತರ ಸಹಕಾರಿ ಸಂಸ್ಥೆಯು ಸದರಿ ಚೆಕ್ಕನ್ನು ನಗದು ಗೊಳಿಸಲು ಸ್ಟೇಟ್

ಬ್ಯಾಂಕ ಆಪ ಇಂಡಿಯಾ ಸಿದ್ಧಾಪುರ ಶಾಖೆಗೆ ಹಾಕಿದಾಗ ನಿನ್ನ ಖಾತೆಯಲ್ಲಿ ಸಾಕಷ್ಟು ಹಣ ಇರದ ಕಾರಣ ದಿಃ 14-10-2025 ರಂದು "**Funds Insufficient**" ಎಂಬ ಹಿಂಬರಹದೊಂದಿಗೆ ವಾಪಸ್ ಬಂದಿರುವುದಾಗಿ ಮತ್ತು ಸದರಿ ವಿಷಯವನ್ನು ದಿಃ 29-10-2025 ರಂದು ಅವರ ವಕೀಲರ ಮೂಲಕ ನೋಟಿಸ್ಸು ನೀಡಿ ತಿಳಿಸಿರುವುದಾಗಿ, ಸದರಿ ನೋಟಿಸ್ಸನ್ನು ಆರೋಪಿತನಾದ ನೀನು ದಿನಾಂಕ 01.11.2025 ರಂದು ಪಡೆದುಕೊಂಡಿದ್ದರೂ ಸದರಿ ಹಣವನ್ನು ನೀನು ಮರುಪಾವತಿ ಮಾಡದೇ **ನೆಗೊಷಬಲ್ ಇನ್ಸ್ಟ್ರುಮೆಂಟ್ ಆಕ್ಟ ರ 138** ಅಡಿಯಲ್ಲಿ ಅಫರಾದ ಎಸುಗಿರುವಿರೆಂದು ನಿನ್ನ ಮೇಲೆ ಆರೋಪಣೆ ಇದೆ ಮತ್ತು ಸ್ದ್ರಿ ಆರೋಪಣೆಯನ್ನು ಈ ನ್ಯಾಯಾಲಯದ ಅಧಿಕಾರ ವ್ಯಾಪ್ತಿಯಲ್ಲಿ ಮಾಡಿರುತ್ತೀಯಾ ಎಂದು ಆರೋಪಿಸಲಾಗಿದೆ.

ಈ ಮೇಲ್ಕಂಡ ಆರೋಪಣೆಗೆ ನೀನು ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸಿರುತ್ತೇನೆ .

ಪ್ರಶ್ನೆಃ 1. ಈಗ ನಿನಗೆ ಮೇಲೆ ಓದಿ ಹೇಳಿ ವಿವರಿಸಿದ ಆರೋಪಣೆ ತಿಳಿಯಿತೆ ?

**ಉತ್ತರಃ**

ಪ್ರಶ್ನೆಃ 2. ನೀನು ಈ ಮೇಲಿನ ಆರೋಪಣೆಯನ್ನು ಒಪ್ಪಿಕೊಳ್ಳುತ್ತಿಯೋ ಅಥವಾ ನಿನ್ನ ವಿರುದ್ಧ ವಿಚಾರಣೆ ನಡೆಯಬೇಕೆ?

**ಉತ್ತರಃ**

**ಪ್ರಶ್ನೆಃ 3** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-1 ಚೆಕ್ಕಿನ ನಂ 394358 ನಿಮ್ಮ ಕೆನರಾ ಬ್ಯಾಂಕ್ ಖಾತಾ ನಂ.03382210009466 ಖಾತೆಗೆ ಸಂಬಂಧಿಸಿದ ಚೆಕ್ ಆಗಿರುತ್ತದೆ ಎಂಬುದನ್ನು ಒಪ್ಪಿಕೊಳ್ಳವಿರಾ?

**ಉತ್ತರಃ**

**ಪ್ರಶ್ನೆಃ 4** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-1 ಚೆಕ್ಕಿನ ನಂ 394358 ಮೇಲಿನ ಸಹಿ ನಿಮ್ಮದೇ ಎಂದು ಒಪ್ಪಿಕೊಳ್ಳುವಿರಾ?

**ಉತ್ತರಃ**

**ಪ್ರಶ್ನೆ: 5** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-1 ಚೆಕ್ಕಿನ ನಂ 394358 ನ್ನು ಪಿರ್ಯಾದಿ ಸೊಸೈಟಿಗೆ ನೀಡಿರುವುದಾಗಿ ನೀವು ಒಪ್ಪಿಕೊಳ್ಳುವಿರ?

**ಉತ್ತರ:**

**ಪ್ರಶ್ನೆ: 6** ನೀವು ಪಿರ್ಯಾದಿ ಸೊಸೈಟಿಯಲ್ಲಿ ಸಾಲದ ಖಾತೆ ನಂಃ BL-1101200001643 ನ್ನು ಹೊಂದಿರುವಿರಾ?

**ಉತ್ತರ:**

**ಪ್ರಶ್ನೆ: 7** ಪಿರ್ಯಾದಿ ಸೊಸೈಟಿಯಿಂದ ದಿನಾಂಕ 08.04.2024 ರಂದು ರೂ. 20,00,000/- ಸಾಲವನ್ನು ಪಡೆದಿರುವಿರಾ?

**ಉತ್ತರ:**

**ಪ್ರಶ್ನೆ: 8** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-1 ಚೆಕ್ಕಿನ ನಂ 394358 ದಿನಾಂಕ 08.10.2025 ರಲ್ಲಿ ನಮೂದಿಸಿದ ರೂ. 5,00,000/- ನ್ನು ( ಐದು ಲಕ್ಷ ರೂಪಾಯಿ ಮಾತ್ರ) ಪಿರ್ಯಾದಿ ಸೊಸೈಟಿಗೆ ಪಾವತಿ ಮಾಡುವ ಭಾದ್ಯತೆಯನ್ನು ನೀವು ಒಪ್ಪಿಕೊಳ್ಳುವಿರಾ?

**ಉತ್ತರ:**

**ಪ್ರಶ್ನೆ: 9** ಈ ಹಂತದಲ್ಲಿ ಈ ಪ್ರಕರಣವನ್ನು ರಾಜೀ ಮಾಡಿಕೊಳ್ಳಲು ಇಚ್ಚಿಸುವಿರಾ?

**ಉತ್ತರ:**

ಸದ್ರಿ ಮೇಲಿನ ಆರೋಪಣೆಗಳನ್ನು ತೆರೆದ ನ್ಯಾಯಾಲಯದಲ್ಲಿ ದಿಃ **07-01-2026** ರಂದು ಆರೋಪಿತನಿಗೆ ಓದಿ ಹೇಳಿ, ಕೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

**ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ.,ಸಿದ್ದಾಪುರ.**